# ಶ್ರೀ ವಿಜಯ ಮಹಾಂತೇಶ ಕಲೆ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ
## ಇಲಕಲ್ಲ

## ಹಳೆಯ ವಿದ್ಯಾರ್ಥಿಗಳ ಸಂಘ (Alumni)

## -: ವರದಿ :-

ಮಾನ್ಯರೆ,

ಶ್ರೀ ವಿಜಯ ಮಹಾಂತೇಶ ವಿದ್ಯಾವರ್ಧಕ ಸಂಘದ ಶ್ರೀವಿಜಯ ಮಹಾಂತೇಶ ಕಲೆ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯವು 1964ರಲ್ಲಿ ಪ್ರಾರಂಭಿಸಿಲ್ಪಟ್ಟ ಕಳೆದ 4ದಶಕಗಳಿಂದ ಈ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಯಲ್ಲಿ ಅತ್ಯಂತ ಮಹತ್ವದ ಪಾತ್ರವನ್ನು ವಹಿಸಿಸುತ್ತಾ ಬಂದಿದೆ. ಕೇವಲ 149 ವಿದ್ಯಾರ್ಥಿಗಳಿಂದ ಪ್ರಾರಂಭವಾದ ಈ ಮಹಾವಿದ್ಯಾಲಯವು ಇಂದು ಬೃಹದಾಕಾರವಾಗಿ ಬೆಳೆದು ಸಾವಿರಾರು ವಿದ್ಯಾರ್ಥಿಗಳ ಭವಿಷ್ಯವನ್ನು ನಿರ್ಧರಿಸುತ್ತದೆ. ಈ ಮಹಾವಿದ್ಯಾಲಯದಲ್ಲಿ ವ್ಯಾಸಂಗ ಮಾಡಿದ ಅನೇಕ ವಿದ್ಯಾರ್ಥಿಗಳು ಇಂದು ಡಾಕ್ಟರ್ಸ್, ಇಂಜಿನಿಯರ್‍ರು, ಅಧ್ಯಾಪಕರು, ವಕೀಲರು, ಸಾಮಾಜಿಕ ಸೇವಾಕಾರ್ಯಕರ್ತರು, ವಿಜ್ಞಾನಿಗಳಾಗಿ ಪ್ರಗತಿಪರ ರೈತರಾಗಿ, ಉದ್ಯಮಿಗಳಾಗಿ ವಿವಿಧ ಕ್ಷೇತ್ರಗಳಲ್ಲಿ ಸಾರ್ಥಕ ಸೇವೆ ಸಲ್ಲಿಸುತ್ತಿದ್ದಾರೆ.

ದಿನಾಂಕ 17/07/2002ರಲ್ಲಿ ಮಹಾವಿದ್ಯಾಯದ ಹಳೆಯ ವಿದ್ಯಾರ್ಥಿಗಳ ಸಂಘ (Alumni) ವನ್ನು ಈ ಕೆಳಗಿನ ಉದ್ದೇಶಗಳನ್ನು ಇಟ್ಟುಕೊಂಡು ಪ್ರಾರಂಭಿಸಲಾಯಿತು.

1. ದೇಶ-ವಿದೇಶಗಳಲ್ಲಿ ಹಲವಾರು ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿ ಸಮುದಾಯದ ಸಂಪರ್ಕ ಬೆಳೆಸುವದು.
2. ವಿದ್ಯಾರ್ಥಿ ಸಮುದಾಯದ ಬೆಳವಣಿಗೆಗೆ ಹಾಗೂ ಸಂಸ್ಥೆಯ ಬೆಳವಣಿಗೆಗಾಗಿ 'ನಿರಂತರ ಸಭೆ' ಮೂಲಕ ವಿಚಾರ ವಿನಿಮಯ ಮಾಡಿಕೊಳ್ಳುವದು.
3. ಉನ್ನತ ಸಾಧನೆಗೈದ ಹಳೆಯ ವಿದ್ಯಾರ್ಥಿಗಳ ಸಲಹೆ-ಸೂಚನೆ ಹಾಗೂ ಅನುಭವದ ಪ್ರಯೋಜನ ಪಡೆದು, ಪ್ರಸಕ್ತ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸುವದು.
4. ವಿದ್ಯಾರ್ಥಿಗಳ ಭವಿಷ್ಯದ ಅಭಿವೃದ್ಧಿಗಾಗಿ ಕಾರ್ಯಾಗಾರ ವಿಚಾರ ಸಂಕೀರ್ಣಗಳನ್ನು ಏರ್ಪಡಿಸುವುದು.

ನಮ್ಮ ಹಳೆಯ ವಿದ್ಯಾರ್ಥಿಗಳ ಸಂಘವು ಪ್ರಾರಂಭವಾದಾಗಿನಿಂದ ಇದುವರೆಗೆ ಹಮ್ಮಿಕೊಂಡ ಕಾರ್ಯಕ್ರಮಗಳ ಸಂಕ್ಷಿಪ್ತ ವರದಿಯನ್ನು ತಮ್ಮೆದುರು ಸಾದರಪಡಿಸಿತ್ತಿದ್ದೇವೆ.

1. 2003-04ನೇ ಸಾಲಿನ ಮಹಾವಿದ್ಯಾಲಯದ ಎಲ್ಲಾ ಪದವಿ-ಪದವಿ ಪೂರ್ವ ಪ್ರಥಮ ಹಾಗೂ ದ್ವಿತೀಯ ದರ್ಜೆಯಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ನಗದು ಬಹುಮಾನವನ್ನು ಕೊಡುವ ಪರಂಪರೆಯನ್ನು ಹಾಕಿಕೊಳ್ಳಲಾಗಿದೆ. ವರ್ಗಕ್ಕೆ ಪ್ರಥಮರಾಗಿರುವರಿಗೆ ರೂ. 1000/- ಹಾಗೂ ದ್ವಿತೀಯ ಸ್ಥಾನ ಪಡೆದವರಿಗೆ ರೂ. 500/- ನಗದು ಬಹುಮಾನವನ್ನು ಪ್ರತಿ ವರ್ಷ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಹಂಚಲಾಗುತ್ತದೆ.